|| Jai Sri Gurudev ||

# SRI ADICHUNCHANAGIRI FIRST GRADE COLLEGE,

**CHANNARAYAPATANA-573116**


Date: 12/08/2024

## Report on Mass pledge against drugs during Nasha Mukth Bharath Abhiyan

Nasha Mukti Bharat Abhiyan (Drug-Free India Campaign) is an initiative of the Government of India aimed at eradicating the scourge of drug abuse in the country. As part of this campaign, various programs and activities are organized across the country to create awareness and encourage people to take a stand against drug addiction.

A mass pledge was organized in our college on 12th August 2024 at 10 am as part of Nasha Mukti Bharat Abhiyan. The programme was organized by Dr. Nirupama M in Kuvempu Vedike. The pledge is "I pledge to stay away from drugs and lead a healthy, productive life. I will support those who are struggling with addiction and work towards creating a drug-free community. Together, we can make India a Nasha Mukt Bharat." This was thought by Mr. Narashimhamurthy. All the students including faculty participated and took the pledge. The pledge serves as both a personal commitment and a public declaration of support for the fight against drug abuse, contributing to the overall goals of the Nasha Mukt Bharat Abhiyan.






ನೋಡಲ್ ಆಫೀಸರ್
ಭಾರತೀಯ ಯುವ ರೆಡ್‌ಕ್ರಾಸ್ ಘಟಕ
ಆದಿಚುಂಚನಗಿರಿ ಪ್ರಥಮ ದರ್ಜೆ ಕಾಲೇಜು
ಚನ್ನರಾಯಪಟ್ಟಣ

Principal
Sri Adichunchanagiri First Grade College
Channarayapatna

Sri Adichunchanagiri First Grade College
Channarayapatna
Est.1979

ಕರ್ನಾಟಕ ಸರ್ಕಾರ

## ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಛೇರಿ, ಹಾಸನ ಜಿಲ್ಲೆ

ಸಂ:ಸಾಅಂಕ/ನಶಾಮುಕ್ತ ಭಾರತ್ ಅಭಿಯಾನ/2024-25 ದಿನಾಂಕ:08.08.2024

## ಸುತ್ತೋಲೆ

ವಿಷಯ: 78ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಎಲ್ಲಾ ಶಾಲೆಗಳು, ಕಾಲೇಜುಗಳು, ಮಹಾವಿದ್ಯಾಲಯಗಳು, ತಾಂತ್ರಿಕ ಮತ್ತು ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ ನಶಾಮುಕ್ತ ಭಾರತ ಅಭಿಯಾನದಡಿ ಮಾದಕ ವಸ್ತು ಸೇವನೆ ಮಾಡದಿರಲು ಪ್ರತಿಜ್ಞೆ ಸ್ವೀಕರಿಸುವ ಬಗ್ಗೆ.

ಉಲ್ಲೇಖ: 1.ಕೇಂದ್ರ ಸರ್ಕಾರದ ಅರೆ ಸರ್ಕಾರಿ ಪತ್ರದ ಸಂಖ್ಯೆ:12-2/2020-DP-1 ದಿ:02.08.2024
2.ನಿರ್ದೇಶಕರು, ವಿಕಲಚೇತನರು ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬೆಂಗಳೂರು ರವರ ಪತ್ರದ ದಿನಾಂಕ:07.08.2024.

*******

ವಿಷಯಕ್ಕೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರದ ಉಲ್ಲೇಖ(1) ಅರೆ ಸರ್ಕಾರಿ ಪತ್ರದಲ್ಲಿ 78ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಹಾಗೂ ನಶಾಮುಕ್ತ ಭಾರತ್ ಅಭಿಯಾನ ಪ್ರಾರಂಭವಾಗಿ 5ನೇ ವರ್ಷದ ಅವಧಿಗೆ ಬರುತ್ತಿರುವುದರಿಂದ ನಶಾಮುಕ್ತ ಭಾರತ್ ಅಭಿಯಾನ ಯೋಜನೆಯಡಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ತಿಳಿಸಲಾಗಿರುತ್ತದೆ.

1. ದಿನಾಂಕ:12.08.2024ರ ಬೆಳಗ್ಗೆ 9.00 ಗಂಟೆಗೆ ಎಲ್ಲಾ ಶಾಲೆಗಳು, ಕಾಲೇಜುಗಳು, ಮಹಾವಿದ್ಯಾಲಯಗಳು, ತಾಂತ್ರಿಕ ವೈದ್ಯಕೀಯ ಮಹಾವಿದ್ಯಾಲಯಗಳಲ್ಲಿ, ಐಐಟಿಸ್, ಐಐಎಂಎಸ್, ಪಾಲಿಟೆಕ್ನಿಕ್ ಕಾಲೇಜುಗಳು, ಪ್ರೈವೆಟ್ ಇನ್ಸಿಟ್ಯೂಟ್ಸ್ ಮತ್ತು ಸಾರ್ವಜನಿಕ ಸಂಸ್ಥೆಗಳಲ್ಲಿ ಮಾದಕ ವಸ್ತು ಸೇವನೆ ಮಾಡದಿರಲು ಪ್ರತಿಜ್ಞೆ ಸ್ವೀಕರಿಸುವುದು.
2. ಪ್ರತಿಜ್ಞೆ ಸ್ವೀಕರಿಸುವ ಸಂದರ್ಭದ ಫೋಟೋ/ವಿಡಿಯೋ ಮಾಡಲು ಈ ಪತ್ರದೊಂದಿಗೆ ಲಗತ್ತಿಸಿರುವ ಬ್ಯಾಕ್ ಡ್ರಾಪ್‌ನ್ನು ಅಳವಡಿಸುವುದು.
3. ಶೈಕ್ಷಣಿಕ ಸಂಸ್ಥೆಗಳಲ್ಲಿ ಕ್ರೀಡಾ ಮತ್ತು ಸಾಂಸ್ಕೃತಿಕ ಸಂಸ್ಥೆಗಳನ್ನು ಮಾದಕ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ವಿಚಾರಗೋಷ್ಠಿ ಮತ್ತು ಕಾರ್ಯಾಗಾರಗಳನ್ನು ಹಾಗೂ ವಿದ್ಯಾರ್ಥಿಗಳ ರ್‍ಯಾಲಿ, ಮ್ಯಾರಥಾನ್, ಬೀದಿ ನಾಟಕಗಳನ್ನು ಆಯೋಜಿಸುವುದು.
4. ಶಾಲಾ/ಕಾಲೇಜು ಆವರಣಗಳಲ್ಲಿ ನಶಾಮುಕ್ತ ಭಾರತ್ ಅಭಿಯಾನದ ನೆನಪಿನ ಪ್ರಯುಕ್ತ ಒಂದು ಸಸಿಯನ್ನು ನೆಡುವುದು.
5. ಸ್ವಾತಂತ್ರ್ಯ ದಿನಾಚರಣೆಯ ದಿನದಂದು ಮುಖ್ಯ ಅತಿಥಿಗಳ ಭಾಷಣದಲ್ಲಿ ನಶಾಮುಕ್ತ ಭಾರತ್ ಅಭಿಯಾನದ ಕುರಿತು ಈ ಪತ್ರದೊಂದಿಗೆ ಲಗತ್ತಿಸಿರುವ ಭಾಷಣ ಮಾಡಲು ಕ್ರಮಕೈಗೊಳ್ಳುವುದು.

ಮೇಲೆ ತಿಳಿಸಿರುವಂತೆ ನಶಾಮುಕ್ತ ಭಾರತ್ ಅಭಿಯಾನದ ಎಲ್ಲಾ ಕಾರ್ಯಕ್ರಮಗಳನ್ನು ಕಛೇರಿ, ಶಾಲಾ ಕಾಲೇಜು, ವಿಶ್ವವಿದ್ಯಾಲಯಗಳು, ವಸತಿನಿಲಯ, ಸಮುದಾಯದಲ್ಲಿ ಹಾಗೂ ಸಂಘ ಸಂಸ್ಥೆಗಳಲ್ಲಿ ಆಯೋಜಿಸುವ ಪ್ರತಿಜ್ಞೆ ಸ್ವೀಕರಿಸುವ ಮೂಲಕ ಕೇಂದ್ರ ಸರ್ಕಾರದ ನಶಾಮುಕ್ತ ಭಾರತ್ ಅಭಿಯಾನ ಯೋಜನೆಗಳನ್ನು ಯಶಸ್ವಿಗೊಳಿಸಲು ಉಲ್ಲೇಖ(2)ರ ಪತ್ರದಲ್ಲಿ ಕೋರಿರುವ ಹಿನ್ನಲೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದೆ.

ಜಿಲ್ಲಾಧಿಕಾರಿಗಳು,
ಹಾಸನ ಜಿಲ್ಲೆ, ಹಾಸನ

ಪ್ರತಿಯನ್ನು:-

1. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಹಾಸನ ಜಿಲ್ಲೆ
2. ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಸನ ಜಿಲ್ಲೆ
3. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ಹಾಸನ ಜಿಲ್ಲೆ

4. ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಸನ ಜಿಲ್ಲೆ
5. ಉಪನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಹಾಸನ ಜಿಲ್ಲೆ ಮಾಹಿತಿಗಾಗಿ
ರವಾನಿಸುತ್ತಾ, ಈ ಬಗ್ಗೆ ವ್ಯಾಪಕ ಪ್ರಚಾರ ನೀಡಲು ಸೂಚಿಸಿದೆ.
6. ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಹಾಸನ ಜಿಲ್ಲೆ
7. ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಹಾಸನ ಜಿಲ್ಲೆ
8. ಜಿಲ್ಲಾಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಹಾಸನ ಜಿಲ್ಲೆ
9. ಜಿಲ್ಲಾಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಾಸನ ಜಿಲ್ಲೆ
10. ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಾಂಸ್ಕೃತಿಕ ಇಲಾಖೆ, ಹಾಸನ ಜಿಲ್ಲೆ
11. ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಮಾಹಿತಿಗಾಗಿ ರವಾನಿಸುತ್ತಾ
ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದೆ.
12. ಮುಖ್ಯಸ್ಥರು, ಭುವನೇಶ್ವರಿ ಅಸೋಸಿಯೇಷನ್ (ರಿ) ಹರಿಹರ, ದಾವಣಗೆರೆ ಜಿಲ್ಲೆ ರವರ ವತಿಯಿಂದ
ನಡೆಯುತ್ತಿರುವ ಹಾಸನ ನಗರದ ಮದ್ಯಪಾನ ಮುಕ್ತಿ ಕೇಂದ್ರ

Sri Adichunchanagiri First Grade College
Channarayapatna
Est. 1979

ಪ್ರತಿಯನ್ನು:-

1) ನಿರ್ದೇಶಕರು, ವಿಕಲಚೇತನರು ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾಸನ ರವರ ಮಾಹಿತಿಗಾಗಿ
3) ಕಚೇರಿ ಕಡತಕ್ಕೆ

Sri Adichunchanagiri First Grade College
Channarayapatna
Est. 1979

# ಪ್ರತಿಜ್ಞೆ

ಆತ್ಮೀಯ ಸ್ನೇಹಿತರೇ,

ಯುವಕರು ಪ್ರತಿ ರಾಷ್ಟ್ರದ ಶಕ್ತಿಯಾಗಿರುತ್ತಾರೆ ಮತ್ತು ಯುವ ಶಕ್ತಿಯು ಸಮಾಜ ಮತ್ತು ದೇಶದ ಅಭಿವೃದ್ಧಿಯಲ್ಲಿ ಪ್ರಮುಖ ಕೊಡುಗೆಯನ್ನು ನೀಡುವಲ್ಲಿ ಪಾತ್ರವನ್ನು ವಹಿಸುತ್ತಿದೆ. ಆದ್ದರಿಂದ, ಅತೀ ಹೆಚ್ಚು ಯುವಕರು ನಶಾ ಮುಕ್ತ ಭಾರತ ಅಭಿಯಾನದಲ್ಲಿ ಭಾಗವಹಿಸಿ ಕೊಡುಗೆ ನೀಡುವುದು ಬಹಳ ಮುಖ್ಯ. ದೇಶದ ಈ ಸವಾಲನ್ನು ಸ್ವೀಕರಿಸಿ, ಇಂದು ನಾವು ನಶಾ ಮುಕ್ತ ಭಾರತ ಅಭಿಯಾನದ ಅಡಿಯಲ್ಲಿ ಒಂದಾಗುತ್ತಿದ್ದೇವೆ ಮತ್ತು ಸಮುದಾಯ, ಕುಟುಂಬ, ಸ್ನೇಹಿತರು ಮಾತ್ರವಲ್ಲದೆ ನಾವೂ ಮಾದಕ ವ್ಯಸನದಿಂದ ಮುಕ್ತರಾಗುತ್ತೇವೆ, ಎಂಬ ಪ್ರತಿಜ್ಞೆಯನ್ನು ತೆಗೆದುಕೊಳ್ಳುತ್ತೇವೆ. ಏಕೆಂದರೆ ಬದಲಾವಣೆ ನಮ್ಮಿಂದಲೇ ಪ್ರಾರಂಭವಾಗಬೇಕಿರುತ್ತದೆ.

ಆದ್ದರಿಂದ ನಾವೆಲ್ಲರೂ ಒಟ್ಟಾಗಿ ನಮ್ಮ ರಾಜ್ಯ/ಜಿಲ್ಲೆಯನ್ನು----- (ರಾಜ್ಯ / ಜಿಲ್ಲೆಯ ಹೆಸರು) ಮಾದಕ ವ್ಯಸನದಿಂದ ಮುಕ್ತಗೊಳಿಸಲು ದೃಢ ನಿರ್ಧಾರ ತೆಗೆದುಕೊಳ್ಳುತ್ತೇವೆ.

ನನ್ನ ದೇಶವನ್ನು ಮಾದಕ ವಸ್ತು ವ್ಯಸನದಿಂದ ಮುಕ್ತಗೊಳಿಸಲು ನನ್ನ ಕೈಲಾದಷ್ಟು ಸಾಧ್ಯವಿರುವ ಎಲ್ಲಾ ಪ್ರಯತ್ನವನ್ನು ಮಾಡುತ್ತೇನೆ ಎಂದು ಪ್ರತಿಜ್ಞೆ ಸ್ವೀಕರಿಸುತ್ತೇನೆ.

ಜೈ ಹಿಂದ್